**ಪ್ರ ದ ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ**

**ಸಿ ಸಿ ನಂಃ 1398/2023**

ಚಾಸಾ4

ಪ್ರಾಸಾ2

ಸಾಕ್ಷಿಯ ಹೆಸರು : ಉತ್ತಪ್ಪ

ತಂದೆ / ಗಂಡನ ಹೆಸರು : ರಾಮಪ್ಪ

ವಯಸ್ಸು : 61

ಉದ್ಯೋಗ : ಗುತ್ತಿಗೆಗಾರರು

ವಾಸ ಸ್ಥಳ : ಗುಡ್ಡೆಹೊಸೂರು

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ 07.11.2025**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿ ಪಂಚನಾಮೆಯನ್ನು ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2ಎ ಎಂದು ಗುರುತಿಸಲಾಯಿತು. ನಿಪಿ 2 ರಲ್ಲಿ ಬರೆದಿರುವ ವಿಚಾರ ನನಗೇನು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ. ಹಾಗೂ ಯಾವುದೆ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ. ಹಾಗೂ ನಾನು ಪೋಲಿಸರ ಮುಂದೆ ಯಾವುದೆ ಹೇಳಿಕೆ ನೀಡಿರುವುದಿಲ್ಲ. ಈ ಪ್ರಕರಣದ ವಿಚಾರ ನನಗೆ ಗೊತ್ತಿಲ್ಲ.

(ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಕೋರಿರುತ್ತಾರೆ. ವಾದ ವಿವಾದ ಆಲಿಸಿದ್ದೇನೆ. ದಾಖಲೆಗಳನ್ನು ಪರಿಶೀಲಿಸಿದೆ. ಅನುಮತಿಸಿದೆ.)

**ಪಾಟಿ ಸವಾಲುಃ ಮಾನ್ಯ ಎಪಿಪಿ ಯವರಿಂದ**

ದಿಃ 28.08.2023 ರಂದು ನನ್ನ ಹಾಗೂ ಚಾಸಾ 5 ರವರ ಸಮಕ್ಷಮ ನಿಪಿ 2 ರಂತೆ ಸ್ಥಳ ಪಂಚನಾಮೆಯನ್ನು ಮಾಡಿ 90 ಎಂ ಎಲ್ ನ ಒರಿಜನಲ್ ಚಾಯ್ಸು ಡೆಲಕ್ಸ ವಿಸ್ಕಿಯ, 28 ಟೆಟ್ರಾ ಪ್ಯಾಕೇಟುಗಳು ಮತ್ತು ಬಿಳಿ ಬಣ್ಣ ದ ಪ್ಲಾಸ್ಟಿಕ್ ಕವರ್ ಹಾಗೂ 200 ರೂ ನಗದು ಹಣವನ್ನು ಅಮಾನತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಾಗೆ ಅದೆ ದಿನ ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯ ಭಾಗವನ್ನು ಸಂಪೂರ್ಣ ನಿರಾಕರಿಸಿದ ಮೇರೆಗೆ ನಿಪಿ 3 ಎಂದು ಗುರುತಿಸಲಾಯಿತು. ನಿಪಿ 2 ಮತ್ತು 3 ರ ವಿಚಾರ ಎಲ್ಲಾ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/–

ಪ್ರ ದ ನ್ಯಾದಂ, ಕುಶಾಲನಗರ.